## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:163 ಕ್ಕೆ ಉತ್ತರ.**

**ವಿಷಯ:-**

ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಅನುಸೂಚಿಯ ಪಟ್ಟಿಯಲ್ಲಿ ಕ್ರಮ ಸಂಖ್ಯೆ:9 ರಲ್ಲಿ ತಿಳಿಸಿರುವಂತೆ ಗೊಂಡ ಜಾತಿಯು ಪರಿಶಿಷ್ಟ ಜಾತಿಗೆ ಒಳಪಟ್ಟಿರುತ್ತದೆ. ಈ ಬಗ್ಗೆ ಸರ್ಕಾರದ ಸೂಕ್ತ ಆದೇಶವೂ ಇರುವುದರಿಂದ ಬೀದರ್ ಜಿಲ್ಲೆಯಲ್ಲಿ ಈಗಾಗಲೇ ಜಾತಿ ಸಿಂಧುತ್ವ ಹಾಗೂ ಜಾತಿ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆ. ಆದರೆ ಅಖಂಡ ಕಲಬುರಗಿ ಜಿಲ್ಲೆ ಅಥವಾ ಈಗಿನ ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಈ ಪ್ರಮಾಣಗಳನ್ನು ನೀಡುತ್ತಿಲ್ಲ. ಇದರಿಂದಾಗಿ ಹಲವು ವರ್ಷಗಳಿಂದ ವಿವಿಧ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಸಿಂಧುತ್ವ ಪ್ರಮಾಣಪತ್ರ ಸಿಗದೆ ಅತಂತ್ರರಾಗಿದ್ದಾರೆ. ಆದ್ದರಿಂದ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸಳೆಯಬಯಸುತ್ತೇನೆ.

*****

**ಉತ್ತರ:-**

ರಾಜ್ಯದಲ್ಲಿ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಒಟ್ಟು 50 ಜಾತಿಗಳು ಇರುತ್ತವೆ. ಅದರಂತೆ, ಪರಿಶಿಷ್ಟ ಪಂಗಡದ ಜಾತಿ ಪಟ್ಟಿಯಲ್ಲಿರುವ ಕ್ರಮ ಸಂಖ್ಯೆ(9)ರಲ್ಲಿ ಗೊಂಡ, ರಾಜಗೊಂಡ, ನಾಯಕ್ ಪೊಡ್ ನಮೂದಾಗಿರುತ್ತದೆ. ಜಾತಿ ಪ್ರಮಾಣ ಪತ್ರಗಳನ್ನು ನೀಡುವ ಸಕ್ಷಮ ಪ್ರಾಧಿಕಾರ ಕಂದಾಯ ಇಲಾಖೆಯು ಆಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ಸಕಇ 112 ಎಸ್ ಎ ಡಿ 2020, ದಿನಾಂಕ:16.01.2021ರಲ್ಲಿ 06 ಪರಿಶಿಷ್ಟ ಜಾತಿ ಮತ್ತು 12 ಪರಿಶಿಷ್ಟ ಪಂಗಡದ ಸೇರಿದ ಅಭ್ಯರ್ಥಿಗಳು ಜಾತಿ ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡುವ ಪೂರ್ವದಲ್ಲಿ ಸರ್ಕಾರದ ಸಂಸ್ಥೆಯಾದ ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ(ಜಾಗೃತ ಕೋಶ) ದಿಂದ ವರದಿ ಪಡೆದು, ಪರಿಶೀಲಿಸಿ ಜಾತಿ ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡುವುದೆಂದು ಆದೇಶಿಸಲಾಗಿರುತ್ತದೆ. ನಂತರದಲ್ಲಿ, ಸದರಿ ಆದೇಶವನ್ನು ದಿನಾಂಕ:15.03.2022 ರಂದು ಹಿಂಪಡೆಯಲಾಗಿರುತ್ತದೆ. ಮುಂದುವರೆದು, ಸಮಾಜ ಕಲ್ಯಾಣ ಇಲಾಖೆಯು ಕಾಲ-ಕಾಲಕ್ಕೆ ಹೊರಡಿಸಿರುವ ಸುತ್ತೋಲೆಗಳಲ್ಲಿ ಜಾತಿ ಪ್ರಮಾಣ ಪತ್ರ ನೀಡಲು ಅನುಸರಿಸಬೇಕಾದ ಕ್ರಮಗಳನ್ವಯ ಅಖಂಡ ಕಲಬುರಗಿ ಜಿಲ್ಲೆ ಅಥವಾ ಈಗಿನ ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳನ್ನೊಳಗೊಂಡಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಾಸವಿರುವ ಗೊಂಡ, ರಾಜಗೊಂಡ, ನಾಯಕ್ ಪೊಡ್ ಸಮುದಾಯದ ಅರ್ಹರಿಗೆ ನಿಯಮಾನುಸಾರ ಪರಿಶೀಲಿಸಿ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರವನ್ನು ನಿಗಧಿತ ಅವಧಿಯೊಳಗೆ ತುರ್ತಾಗಿ ನೀಡುವಂತೆ ಸಕ್ಷಮ ಪ್ರಾಧಿಕಾರಗಳಿಗೆ ಸೂಚಿಸಲಾಗಿರುತ್ತದೆ.

**ಸಕಇ 161 ಎಸ್‌ಎಡಿ 2022**

**(ಬಿ. ಶ್ರೀರಾಮುಲು)**
ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ
ಕಲ್ಯಾಣ ಇಲಾಖಾ ಸಚಿವರು